# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

DOS in Physical Education & Sports Sciences
University of Mysore
MYSORE-570005
No. 764
20/09/2019
Sports Pavilion

ವಿಷಯ: 2019-20ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ:
1. ವಿಶ್ವವಿದ್ಯಾನಿಲಯದ ಸುತ್ತೋಲೆ ಸಂಖ್ಯೆ: ಇಟಿ.11/28/2019-20 ದಿನಾಂಕ 11.06.2019.
2. ದಿನಾಂಕ 28.06.2019 ರ ಸಿಂಡಿಕೇಟ್ ಸಭೆಯ ತೀರ್ಮಾನ.
3. ಅಧ್ಯಕ್ಷರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈಸೂರು, ಇವರ ಪತ್ರ ಸಂಖ್ಯೆ ಡಿಪಿಇಎಸ್ಎಸ್/147/2019-20 ದಿನಾಂಕ 07.08.2019.
4. ದಿನಾಂಕ 23.08.2019 ನಡೆದ ಆಯ್ಕೆ ಸಮಿತಿ ಸಭೆಯ ನಡವಳಿ.
5. ಅಧ್ಯಕ್ಷರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈಸೂರು, ಇವರ ಪತ್ರ ಸಂಖ್ಯೆ ಡಿಪಿಇಎಸ್ಎಸ್/175/2019-20 ದಿನಾಂಕ 13.09.2019.

** * **

## ಆದೇಶ ಸಂಖ್ಯೆ: ಇಟಿ9/173/2017-18 ದಿನಾಂಕ 17ನೇ ಸೆಪ್ಟೆಂಬರ್ 2019.

ದಿನಾಂಕ 28.06.2019ರಂದು ನಡೆದ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯ ತೀರ್ಮಾನದನ್ವಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2019-20ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಕಂಡ ಅತಿಥಿ ಉಪನ್ಯಾಸಕರುಗಳನ್ನು ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| Sri Ashoka.S S/o Srinivasa, Chandagau Village, Srirangapattana(T), Mandya (D). | ಬಿಪಿಎಡ್/ ಎಂಪಿಎಡ್ | 12 | ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ | 19,500/- |

1/9/19

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸಂಬಂಧಪಟ್ಟ ಅಧ್ಯಯನ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಅಲುನೇ/2012-13ನೇ ಪಾವಿ-1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.